ಸಿವಿಲ್ ಜಡ್ಜ ಮತ್ತು ಜೆ. ಎಂ. ಎಫ್. ಸಿ. ನ್ಯಾಯಾಲಯ, ಶಿಗ್ಗಾಂವ
ಸಿ.ಸಿ. ನಂಃ 155/2018

ಸಿ.ಡಬ್ಲ್ಯೂಃ 7
ಪಿ.ಡಬ್ಲ್ಯೂಃ 5

ಸಾಕ್ಷಿದಾರರ ಹೆಸರುಃ - ಅಬ್ದುಲ ಖಾದರ ರಾಜೇಸಾಬ ಕೊಲ್ಲಾಪುರ

ವಯಸ್ಸು - 47 ವರ್ಷ

ಉದ್ಯೋಗ - ವ್ಯವಸಾಯ

ವಾಸಸ್ಥಳ - ತಡಸ

ದಿನಾಂಕಃ 05.04.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ - ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಸಾಕ್ಷಿಗೆ ಈಗ ವಾಹನ ಪಂಚನಾಮೆಯನ್ನು ತೋರಿಸಿದ್ದು ಅವರ ಸಹಿಯನ್ನು ಗುರುತಿಸಿದ ಮೇರೆಗೆ ಅದನ್ನು ನಿ.ಪಿ-7 ಎಂದು ಮತ್ತು ಅವರ ಸಹಿ ನಿ.ಪಿ-7(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ಪೋಟೋವನ್ನು ತೋರಿಸಿದ್ದು ಅವರನ್ನು ಅವರು ಗುರುತಿಸಿದ ಮೇರೆಗೆ ಅದನ್ನು ನಿ.ಪಿ-8 ಎಂದು ಗುರುತಿಸಲಾಯಿತು. ಪೋಟೋ ಯಾವ ಕಾರಣಕ್ಕೆ ತೆಗೆದರು ಎಂದು ಗೊತ್ತಿಲ್ಲ. ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಾನು ಪೋಲಿಸ ಠಾಣೆಗೆ ಹೋದಾಗ ಕೆಲವು ಕಾಗದಗಳ ಮೇಲೆ ನನ್ನ ಸಹಿ ಪಡೆದುಕೊಂಡಿದ್ದರು. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲಕರ ಸಾಕ್ಷಿ ನುಡಿದ ಕಾರಣ ಸಹಾಯಕ ಸರ್ಕಾರಿ ಅಭಿಯೋಕರಿಗೆ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ದಿ. 17-08-2017 ರಂದು ಸಂಜೆ 4.00 ರಿಂದ 5.00 ಗಂಟೆವರೆಗೆ ನ ನ್ನ, ಚಾಸಾ-6 ರವರ ಹಾಗೂ ಪೋಲಿಸ ಸಿಬ್ಬಂದಿಯವರ ಸಮಕ್ಷಮ ಘಟನೆ ಜಾಗದಲ್ಲಿ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ಕಾಲಕ್ಕೆ ಹಾತ್ ನಕಾಶೆಯನ್ನು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸ್ಥಳದಲ್ಲಿ ಪೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ಸಂಪೂರ್ಣ ಮಾಹಿತಿ ಇದ್ದರು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಓದಿ ಹೇಳಿದ ಮೇಲೆ ಸಹಿ ನೋಡಿ ಹಾಕಿದ್ದೇನೆ ಎಂದರೆ ಸರಿಯಲ್ಲ. ಆರೋಪಿತನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಶ್ರೀ ಎಸ ಕೆ ಎ ಆರೋಪಿ ಪರ ವಕೀಲರು ಪಾಟಿಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇಲೆ ಬೆರಳಚ್ಚು ಮಾಡಲಾಯಿತು )

ಓ ಹೆ ಕೆ ಸರಿ ಅದೆ.

ಜೆ. ಎಂ. ಎಫ್. ಸಿ., ಶಿಗ್ಗಾಂವ.